# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 1, 2, 3ನೇ ತರಗತಿಯಲ್ಲಿ ವಿಶೇಷ ಶಿಕ್ಷಣ ಪಡೆಯುತ್ತಿರುವ ಶ್ರವಣದೋಷವುಳ್ಳ ವಿಕಲಚೇತನ ಮಕ್ಕಳಿಗೆ ಕಲಿಕೆಯ ಉನ್ನತೀಕರಣಕ್ಕಾಗಿ ಉಪಗ್ರಹ ಆಧಾರಿತ ಶಿಕ್ಷಣವನ್ನು 46 ವಿಶೇಷ ಶಾಲೆಗಳಲ್ಲಿ ಅನುಷ್ಠಾನಗೊಳಿಸಲು ಅನುದಾನ ಮಂಜೂರು ಮಾಡುವ ಕುರಿತು.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಮಮಇ 166 ಪಿಹೆಚ್‌ಪಿ 2015, ದಿ:11.09.2015
2. ನಿರ್ದೇಶಕರ ಕಛೇರಿ ಪತ್ರ ಸಂಖ್ಯೆ: ಇಸಿ/11/ಯೋಜನೆ/ ಎಲ್‌ಜಿಡಿ/ ಹೈಸ್ಕೂಲ್/2014-15, ದಿ:03.02.2016
3. ನಿರ್ದೇಶಕರ ಕಛೇರಿ ಪತ್ರ ಸಂಖ್ಯೆ: ಇಸಿ/11/ಯೋಜನೆ/ಎಲ್‌ಜಿಡಿ/ ಹೈಸ್ಕೂಲ್/2014-15/3962, ದಿ:23.02.2016

**ಪ್ರಸ್ತಾವನೆ:**

2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ 46 ವಿಶೇಷ ಶಾಲೆಗಳಲ್ಲಿನ 5, 6, 7ನೇ ತರಗತಿಯ ಮಕ್ಕಳಿಗೆ ಕೇಂದ್ರ ಸರ್ಕಾರದ ರೂ. 2,03,36,000/- ಹಾಗೂ ರಾಜ್ಯ ಸರ್ಕಾರದ ರೂ. 1,38,92,000/- ಲಕ್ಷಗಳ ಸಹಯೋಗದೊಡನೆ ಒಟ್ಟು ರೂ. 3.63 ಕೋಟಿಗಳ ವೆಚ್ಚದಲ್ಲಿ ಉಪಗ್ರಹ ಆಧಾರಿತ ಶಿಕ್ಷಣವನ್ನು ಏರ್ಪಡಿಸುವ ಯೋಜನೆಯ ಅನುಷ್ಠಾನಕ್ಕಾಗಿ ಲೆಕ್ಕ ಶೀರ್ಷಿಕೆ: 2235-02-101-0-05 (ಯೋಜನೆ)ರಡಿಯಲ್ಲಿ ಒದಗಿಸಿದ ಅನುದಾನದ ಮಿತಿಯಲ್ಲಿಯೇ ಭರಿಸಲು ಆಡಳಿತಾತ್ಮಕ ಮಂಜೂರಾತಿಯನ್ನು ಮೇಲೆ ಓದಲಾದ ಕ್ರಸಂ. (1)ರ ಆದೇಶದಲ್ಲಿ ನೀಡಲಾಗಿರುತ್ತದೆ.

ಉಪಗ್ರಹ ಆಧಾರಿತ ಶಿಕ್ಷಣವನ್ನು 1, 2 ಮತ್ತು 3ನೇ ತರಗತಿಯ ಮಕ್ಕಳಿಗೆ ನೀಡುವಂತೆ ದಿ:08.01.2016ರಂದು ಕೇಂದ್ರ ಸರ್ಕಾರದ ಡಿ.ಎ.ಆರ್.ಪಿ.ಜಿ. ಇಲಾಖೆ, ನವದೆಹಲಿಯಲ್ಲಿ ನಡೆದ ಸಭೆಯಲ್ಲಿ ಸೂಚಿಸಿ, ಸದರಿ ಯೋಜನೆಗೆ 2015-16ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಪಾಲಿನ ರೂ. 1.00 ಕೋಟಿ ಅನುದಾನವನ್ನು ನೀಡುವುದಾಗಿ ತಿಳಿಸಿ, ರಾಜ್ಯ ಸರ್ಕಾರದ ಒಪ್ಪಿಗೆಯನ್ನು ತಿಳಿಸಲು ಕೋರಿದನ್ವಯ ಅದರಂತೆ ಒಪ್ಪಿಗೆಯನ್ನು ಸೂಚಿಸಿ, ಪರಿಷ್ಕೃತ ಪ್ರಸ್ತಾವನೆಯೊಂದಿಗೆ ಶಿಫಾರಸ್ಸು ಮಾಡಲು ಪ್ರಸ್ತಾವನೆಯನ್ನು ಮೇಲೆ ಓದಲಾದ ಕ್ರಸಂ. (2)ರ ಪತ್ರದಲ್ಲಿ ಸಲ್ಲಿಸಲಾಗಿರುವ ಬಗ್ಗೆ ತಿಳಿಸಿ ಕೇಂದ್ರ ಸರ್ಕಾರದ ಸಭೆಯಲ್ಲಿ ತೀರ್ಮಾನಿಸಿದನ್ವಯ 1, 2 ಮತ್ತು 3ನೇ ತರಗತಿಯ ಮಕ್ಕಳಿಗೆ ತರಬೇತಿ ಹಮ್ಮಿಕೊಳ್ಳಲು ಹಾಗೂ ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಈ ಕ್ಷೇತ್ರದಲ್ಲಿ ಪರಿಣಿತಿ ಪಡೆದಿರುವ ಐ.ಐ.ಎಮ್. ರವರನ್ನು ನೇಮಕ ಮಾಡಿಕೊಳ್ಳಬಹುದೆಂದು ಹಾಗೂ ಐ.ಐ.ಎಮ್. ಗೆ ಕೆ.ಟಿ.ಪಿ.ಪಿ ಆಕ್ಟ್‌ನ 4(ಬಿ)ರಡಿ ವಿನಾಯಿತಿ ನೀಡುವಂತೆ ಕೋರಿ ಸದರಿ ಯೋಜನೆಗೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ರೂ. 1.00 ಕೋಟಿ ಮೊತ್ತಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡುವಂತೆ ಮೇಲೆ ಓದಲಾದ ಕ್ರಸಂ. (3)ರ ಪತ್ರದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆರವರು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 16 ಪಿಹೆಚ್‌ಪಿ 2016, ಬೆಂಗಳೂರು, ದಿನಾಂಕ:14.03.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ರಾಜ್ಯದ 46 ಶ್ರವಣದೋಷವುಳ್ಳ ಮಕ್ಕಳ ವಿಶೇಷ ಶಾಲೆಗಳಲ್ಲಿನ 1, 2 ಮತ್ತು 3ನೇ ತರಗತಿಗಳಲ್ಲಿನ ಮಕ್ಕಳಿಗೆ ಉಪಗ್ರಹ ಆಧಾರಿತ ಶಿಕ್ಷಣ ನೀಡುವ ಯೋಜನೆಯನ್ನು ಐ.ಐ.ಎಂ. ರವರ ಮುಖಾಂತರ ಅನುಷ್ಠಾನಗೊಳಿಸಲು ಕೆ.ಟಿ.ಪಿ.ಪಿ ಆಕ್ಟ್ 4(ಬಿ)ರಡಿ ಒಬ್ಬರು ತಾಂತ್ರಿಕ ಪ್ರತಿನಿಧಿ ಹಾಗೂ ಶೈಕ್ಷಣಿಕ ಪ್ರತಿನಿಧಿಯೊಂದಿಗೆ ಈ ಕ್ಷೇತ್ರದಲ್ಲಿ ಅನುಭವಹೊಂದಿರುವ ಸಂಶೋಧನಾ

ಸಂಸ್ಥೆ ಪ್ರತಿನಿಧಿ ಒಳಗೊಂಡ ಮೂವರು ತಜ್ಞರ ಸಮಿತಿಯನ್ನು ರಚಿಸಿ ಸದರಿ ಸಮಿತಿಯ ಅನುಮೋದನೆಯೊಂದಿಗೆ ಕೆ.ಟಿ.ಪಿ.ಪಿ ಪ್ರಕ್ರಿಯೆ ಕೈಗೊಳ್ಳುವ ಹಾಗೂ ಅನುಬಂಧದಲ್ಲಿನ (ಲಗತ್ತಿಸಿದೆ) ಮಾರ್ಗಸೂಚಿಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ಈ ಆರ್ಥಿಕ ವರ್ಷದಲ್ಲಿ ರೂ.1.00ಕೋಟಿ ಮೊತ್ತಕ್ಕೆ ಕೆ.ಟಿ.ಪಿ.ಪಿ ನಿಯಮ 4(ಬಿ)ರಡಿ ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಹಾಗೂ ಈ ಯೋಜನೆಯನ್ನು 2015-16ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ: 2235-02-101-0-05 (ಯೋಜನೆ) ಉಪ ಶೀರ್ಷಿಕೆ 117ರಡಿಯಲ್ಲಿ ಉಳಿಕೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಸಕಕಾ 18 ಆಂಆಸ 2016 ದಿನಾಂಕ:16.02.2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಯಲಕ್ಷ್ಮಿ) 14/3/2016
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1. ಪ್ರಧಾನ ಮಹಾಲೇಖಪಾಲರು(ಜಿ& ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು(ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು(ಎ&ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ",ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು-560001
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖಿಕ ಇಲಾಖೆ, ಬಹುಮಹಡಿ ಕಟ್ಟಡ,ಬೆಂಗಳೂರು.
5. ನಿರ್ದೇಶಕರು, ಪಿ.ಎಂ.ಐ. ವಿಭಾಗ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖಿಕ ಇಲಾಖೆ, ಬಹುಮಹಡಿ ಕಟ್ಟಡ,ಬೆಂಗಳೂರು.
6. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು.
7. ಅಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
9. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ ವೆಚ್ಚ(3 & 9), ವಿಧಾನ ಸೌಧ, ಬೆಂಗಳೂರು.
11. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
12. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
13. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
14. ಸರ್ಕಾರದ ಉಪ ಕಾರ್ಯದರ್ಶಿಗಳು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
15. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
16. ಶಾಖಾ ಕಡತ/ ಹಿಡಿಪು/ ಹೆಚ್ಚುವರಿ ಪ್ರತಿಗಳು.

# ಷರತ್ತು ಮತ್ತು ನಿಬಂಧನೆಗಳು

- ಸದರಿ ಯೋಜನೆಯನ್ನು ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸುತ್ತಿರುವುದರಿಂದ 46 ಶಾಲೆಗಳಲ್ಲಿ ಮಾತ್ರ (ಪಟ್ಟಿ ಲಗತ್ತಿಸಿದೆ).
- ಅನುಷ್ಠಾನದ ಅವಧಿಯನ್ನು 01 ವರ್ಷಕ್ಕೆ ಕಡಿತಗೊಳಿಸುವುದು. ಹಾರ್ಡ್‌ವೇರ್ ಸಲಕರಣೆಗಳ ವೆಚ್ಚವನ್ನು ರಾಜ್ಯ ಸರ್ಕಾರ ಭರಿಸುವುದು.
- 1,2, ಮತ್ತು 3ನೇ ತರಗತಿಗಳಿಗೆ ಉಪಗ್ರಹ ಆಧಾರಿತ ಶಿಕ್ಷಣದಡಿ ನೀಡಲಾಗುವ ಶೈಕ್ಷಣಿಕ ಸೇವೆಗಳ ನಿಖರ ಮಾಹಿತಿಯನ್ನು ನೀಡುವುದು.
- ಅನುಷ್ಠಾನದ ವಿವಿಧ ಹಂತಗಳನ್ನು ನಿಖರವಾಗಿ ಗುರುತಿಸುವುದು.
- 01 ರಿಂದ 3ನೇ ತರಗತಿಯ ಶ್ರವಣದೋಷವುಳ್ಳ ಮಕ್ಕಳಿಗೆ ಯೋಜನೆಯ ಅನುಷ್ಠಾನದ ಕುರಿತು ಪರಿಶೀಲಿಸುವುದು.
- ವಿಶೇಷ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಶೇಷ ಶಿಕ್ಷಕರುಗಳು ರಾಷ್ಟ್ರೀಯ ಪುನರ್ವಸತಿ ಮಂಡಳಿಯಿಂದ ಅನುಮೋದಿಸಲಾದ ಸಂಸ್ಥೆಗಳ ಮೂಲಕ ತರಬೇತಿಯನ್ನು ಹೊಂದಿರುವ ಬಗ್ಗೆ ಮತ್ತು ವಿಶೇಷ ಶಾಲೆಗಳನ್ನು ನಡೆಸುತ್ತಿರುವ ಸಂಸ್ಥೆಗಳು ಅಂಗವಿಕಲರ ಅಧಿನಿಯಮದಡಿ ನೊಂದಣಿಯನ್ನು ಮಾಡಿರುವ ಬಗ್ಗೆ ಖಾತ್ರಿ ಪಡಿಸತಕ್ಕದ್ದು.
- ಅಭಿವೃದ್ಧಿ ಪಡಿಸುವ ಇ-ಕಂಟೆಂಟ್ ಮಾರ್ಗಸೂಚಿಗೆ ಅನುಗುಣವಾಗಿರತಕ್ಕದ್ದು.
- ಪಠ್ಯಕ್ರಮದ ಅಂಶಗಳು ಶ್ರವಣ ದೋಷವುಳ್ಳ ಮಕ್ಕಳ ಪಠ್ಯಕ್ರಮದ ನಿಯಮಾವಳಿಗಳಿಗೆ ಅನುಗುಣವಾಗಿರಬೇಕು.
- ಪಠ್ಯಕ್ರಮದ ಅಂಶಗಳು ಸಮುಚಿತ ಪ್ರಾಧಿಕಾರದಿಂದ ಅನುಮೋದನೆಗೊಂಡಿರಬೇಕು.

****